**Bangalore**
**Regional News**
**27.06.2026 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಉಪರಾಷ್ಟ್ರಪತಿ ಬೆಂಗಳೂರಿಗೆ ಭೇಟಿ ; ನಾಡಪ್ರಭು ಕೆಂಪೇಗೌಡರ ೫೧೭ನೇ ಜಯಂತೋತ್ಸವದಲ್ಲಿ ಭಾಗಿ

೨. ಮುಂದೆ ಎದುರಾಗುವ ಬರ ಪರಿಸ್ಥಿತಿ ಎದುರಿಸಲು ರಾಜ್ಯ ಸನ್ನದ್ಧ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೩. ರಾಜ್ಯ ಸರ್ಕಾರ ತಕ್ಷಣವೇ ಬರಗಾಲ ಘೋಷಿಸಲಿ - ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

೪. ನಾಳೆ ಪಲ್ಸ್ ಪೋಲಿಯೋ ಅಭಿಯಾನ ; ರಾಜ್ಯದೆಲ್ಲೆಡೆ ಆರೋಗ್ಯ ಇಲಾಖೆಯಿಂದ ಅಗತ್ಯ ಸಿದ್ಧತೆ

೫. ನಾಳೆ ’ಮನ್ ಕಿ ಬಾತ್’ ಕಾರ್ಯಕ್ರಮ ; ದೇಶವಾಸಿಗಳೊಂದಿಗೆ ಮನದಾಳದ ಮಾತು ಹಂಚಿಕೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ

**<><*<><>*><>**

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಬೆಂಗಳೂರಿಗೆ ಭೇಟಿ ನೀಡಿದ್ದು, ಅವರನ್ನು ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಆರೋಗ್ಯ ಸಚಿವ ಯು.ಟಿ. ಖಾದರ್ ಮತ್ತಿತರರು ಆತ್ಮೀಯವಾಗಿ ಬರಮಾಡಿಕೊಂಡರು. ಬೆಂಗಳೂರಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ನಡೆದ ನಾಡಪ್ರಭು ಕೆಂಪೇಗೌಡ ರ ೫೧೭ನೇ ಜಯಂತಿ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಈ ವೇಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವರುಗಳಾದ ಎಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ನಾಳೆ, ಬೆಂಗಳೂರಿನಲ್ಲಿ ನಡೆಯಲಿರುವ ನಶಾ ಮುಕ್ತ ಭಾರತ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಭಾಗವಹಿಸಲಿದ್ದಾರೆ. ಈ ಸಮಾವೇಶವನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ

ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಹಾಗೂ ಅಂತಾರಾಷ್ಟ್ರೀಯ ಮಾದಕವಸ್ತು ವಿರೋಧಿ ಮತ್ತು ಅಕ್ರಮ ಸಾಗಣೆ ತಡೆ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದೆ.

<><*<><>*><>

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಉತ್ತಮವಾಗಿ ಮಳೆಯಾಗಿದೆ. ಆದರೆ, ಈ ವರ್ಷ ಇಡೀ ದೇಶದಲ್ಲಿ ಬರಗಾಲ ಸಂಭವಿಸಿದೆ. ಎಲ್ಲರೂ ಸೇರಿ ಬರಗಾಲ ಎದುರಿಸಬೇಕು. ರೈತರನ್ನು ಉಳಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನ ಯಲಹಂಕದಲ್ಲಿ ನಡೆದ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ, ತುಂಗಭದ್ರಾ ಅಣೆಕಟ್ಟು ಉಳಿಸಲು ಮೂರು ರಾಜ್ಯದ ಮುಖ್ಯಮಂತ್ರಿಗಳು ಸೇರಿ ಕೇಂದ್ರ ಜಲಶಕ್ತಿ ಸಚಿವರ ಸಮ್ಮುಖದಲ್ಲಿ ತೀರ್ಮಾನ ಮಾಡಿದ್ದೇವೆ. ಈ ಹಿಂದೆ ಇಂದಿರಾಗಾಂಧಿ ಅವರ ನೇತೃತ್ವದಲ್ಲಿ ಕಾವೇರಿ ಕುಡಿಯುವ ನೀರಿನ ಬಗ್ಗೆ ತೀರ್ಮಾನ ಮಾಡಲಾಗಿತ್ತು. ಅದೇ ರೀತಿ ಕೇಂದ್ರ ಜಲಶಕ್ತಿ ಸಚಿವರ ನೇತೃತ್ವದಲ್ಲಿ ಆಂಧ್ರಪ್ರದೇಶ, ತೆಲಂಗಾಣ ಮುಖ್ಯಮಂತ್ರಿಯರನ್ನೊಳಗೊಂಡಂತೆ ಸಭೆ ನಡೆಸಿ ಒಂದು ಒಪ್ಪಂದಕ್ಕೆ ಬಂದಿದ್ದೇವೆ. ಈ ನೆಲ-ಜಲಕ್ಕಾಗಿ ನಾವುಗಳೇ ಸಂಘರ್ಷ ಮಾಡಿಕೊಳ್ಳಬಾರದು. ನಾವೆಲ್ಲರೂ ಭಾರತೀಯರು, ಮಣ್ಣಿನ ಮಕ್ಕಳು ಎಂದು ಹೇಳಿದರು.

<><*<><>*><>

ವಿಶ್ವವಿಖ್ಯಾತ ಬೆಂಗಳೂರು ನಗರದ ನಿರ್ಮಾತೃ, ದೂರದೃಷ್ಟಿಯ ಆಡಳಿತಗಾರ ನಾಡಪ್ರಭು ಕೆಂಪೇಗೌಡರ ೫೧೬ನೇ ಜಯಂತ್ಯೋತ್ಸವವನ್ನು ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದೆಲ್ಲೆಡೆ ಅರ್ಥಪೂರ್ಣವಾಗಿ ಆಚರಿಸಲಾಯಿತು. ಹಾಸನದಲ್ಲಿ ನಡೆದ ಕೆಂಪೇಗೌಡರ ಜಯಂತ್ಯೋತ್ಸವವನ್ನು ಆದಿಚುಂಚನಗಿರಿ ಶಾಖಾಮಠದ ಶ್ರೀ ಶಂಭುನಾಥ ಸ್ವಾಮೀಜಿ ಉದ್ಘಾಟಿಸಿದರು. ಬಳಿಕ ಶ್ರೀಗಳು, ನಾಡಪ್ರಭು ಕೆಂಪೇಗೌಡರ ಆದರ್ಶ, ಆಡಳಿತ ವೈಖರಿ ಹಾಗೂ ಸಮಾಜಮುಖಿ ಚಿಂತನೆ ಇಂದಿನ ಪೀಳಿಗೆಗೆ ದಾರಿದೀಪ ಎಂದರು. ಚಿತ್ರದುರ್ಗದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ ಸಮಾರಂಭದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ನಾಡಪ್ರಭು ಕೆಂಪೇಗೌಡರ ದೂರದೃಷ್ಟಿ ಹಾಗೂ ವ್ಯವಸ್ಥಿತ ಆಡಳಿತ ವೈಖರಿ ಅನುಕರಣೀಯ ಎಂದು ಹೇಳಿದರು. ಕಾರವಾರದಲ್ಲಿ ಉತ್ತರಕನ್ನಡ ಜಿಲ್ಲಾಡಳಿತ ಹಮ್ಮಿಕೊಂಡಿದ್ದ ಕೆಂಪೇಗೌಡ ಜಯಂತಿಯಲ್ಲಿ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಮತ್ತಿತರರು ಭಾಗವಹಿಸಿದ್ದರು. ಕಾರವಾರದ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಕೆ. ಹೇಮಲತಾ ಕೆಂಪೇಗೌಡರ ಕುರಿತು ಉಪನ್ಯಾಸ ನೀಡಿದರು. ಕೊಪ್ಪಳದಲ್ಲಿ ನಾಡಪ್ರಭು

ಕೆಂಪೇಗೌಡ ಜಯಂತಿಯನ್ನು ಆಚರಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಕೋಲಾರ ತಾಲ್ಲೂಕಿನ ವೇಮಗಲ್ ಪಟ್ಟಣದಲ್ಲಿ ನಡೆದ ಕೆಂಪೇಗೌಡರ ಜಯಂತಿಯಲ್ಲಿ ಆದಿಚುಂಚನಗಿರಿ ಚಿಕ್ಕಬಳ್ಳಾಪುರ ಶಾಖಾಮಠದ ಮಂಗಳನಾಥ ಸ್ವಾಮೀಜಿ, ಕೆಂಪೇಗೌಡರ ದೂರದೃಷ್ಟಿ, ಆಧುನಿಕ ಸ್ಪರ್ಶ ಹಾಗೂ ಜಾತ್ಯತೀತ ದೃಷ್ಟಿಕೋನವನ್ನು ಇಂದಿನ ರಾಜಕಾರಣಿಗಳು ಮತ್ತು ಯುವಜನರು ಅನುಕರಿಸಿದಾಗ ಮಾತ್ರ ಅಭಿವೃದ್ಧಿ ಸಾಧ್ಯ ಎಂದರು. ತುಮಕೂರು ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಬಿ.ಸುರೇಶ್‌ಗೌಡ, ನಾಡಪ್ರಭು ಕೆಂಪೇಗೌಡರ ದೂರದೃಷ್ಟಿ, ಅವರ ಜನಪರ ಆಡಳಿತ ಇಂದಿನ ರಾಜಕಾರಣಿಗಳಿಗೆ ಮಾದರಿಯಾಗಿದೆ ಎಂದು ತಿಳಿಸಿದರು. ಬಾಗಲಕೋಟೆಯಲ್ಲಿ ಕೆಂಪೇಗೌಡ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ತಹಶೀಲ್ದಾರ ವಾಸುದೇವ ಸ್ವಾಮಿ ಅವರು ನಾಡಪ್ರಭು ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಪುಷ್ಪ ನಮನ ಸಲ್ಲಿಸಿದರು. ಚಿಕ್ಕಮಗಳೂರಿನಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿಗೆ ಶಾಸಕ ಹೆಚ್.ಡಿ ತಮ್ಮಯ್ಯ ಚಾಲನೆ ನೀಡಿದರು. ಜಿಲ್ಲಾಧಿಕಾರಿ ಭನ್ವರ್ ಸಿಂಗ್ ಮೀನಾ ಸೇರಿ ಹಲವು ಗಣ್ಯರು ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಮೈಸೂರಿನಲ್ಲಿ ನಡೆದ ಕೆಂಪೇಗೌಡರ ಜಯಂತ್ಯೋತ್ಸವವನ್ನು ಶಾಸಕ ಕೆ. ಹರೀಶ್ ಗೌಡ ಉದ್ಘಾಟಿಸಿದರು. ಕೆಂಪೇಗೌಡರ ಆದರ್ಶಗಳ ಬಗ್ಗೆ ವಿವರಿಸಿದರು.

**<><*<><>*><>**

ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರದ ಪರಿಸ್ಥಿತಿ ನಿರ್ಮಾಣವಾಗುತ್ತಿದ್ದು, ಇನ್ನೊಂದು ವಾರದೊಳಗೆ ಸಮರ್ಪಕ ಮಳೆಯಾಗದಿದ್ದರೆ ಕರ್ನಾಟಕ ಸಂಪೂರ್ಣ ಬರಗಾಲದತ್ತ ಸಾಗುವ ಸಾಧ್ಯತೆಯಿದೆ. ರಾಜ್ಯ ಸರ್ಕಾರ ತಕ್ಷಣವೇ ಬರಗಾಲ ಘೋಷಿಸುವಂತೆ ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಈವರೆಗೆ ಕೇವಲ ಶೇ.೩೦ರಷ್ಟು ಮಾತ್ರ ಬಿತ್ತನೆಯಾಗಿದ್ದು, ಶೇ.೭೦ರಷ್ಟು ಪ್ರದೇಶಗಳಲ್ಲಿ ಇನ್ನೂ ಬಿತ್ತನೆ ಪ್ರಾರಂಭವಾಗಿಲ್ಲ. ಮಳೆಯ ಕೊರತೆಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಮುಂದಿನ ಒಂದು ವಾರದಲ್ಲಿಯೂ ಮಳೆ ಬಾರದಿದ್ದರೆ ಕುಡಿಯುವ ನೀರಿನ ಸಮಸ್ಯೆಯೂ ಗಂಭೀರ ಸ್ವರೂಪ ಪಡೆಯಲಿದೆ ಎಂದು ಹೇಳಿದರು. ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಸರ್ಕಾರ ತಕ್ಷಣ ಎಚ್ಚೆತ್ತುಕೊಳ್ಳಬೇಕಿದ್ದು, ಎಲ್ಲ ಜಿಲ್ಲಾಧಿಕಾರಿಗಳ ಸಭೆ ನಡೆಸಿ ವಾಸ್ತವ ಸ್ಥಿತಿಯ ವರದಿ ಪಡೆಯಬೇಕು. ಬರ ಪರಿಹಾರ ಕ್ರಮಗಳನ್ನು ತುರ್ತಾಗಿ ಜಾರಿಗೊಳಿಸಬೇಕು. ಪ್ರಕೃತಿ

ವಿಕೋಪ ಪರಿಹಾರ ನಿಧಿಯಲ್ಲಿ ಹಣ ಲಭ್ಯವಿದ್ದು, ಅದನ್ನು ಸಮರ್ಪಕವಾಗಿ ಬಳಕೆ ಮಾಡಿದರೆ ಕೇಂದ್ರ ಸರ್ಕಾರದಿಂದ ಹೆಚ್ಚುವರಿ ನೆರವು ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

<><*<><>*><>

ರಾಜ್ಯಾದ್ಯಂತ ನಾಳೆ ಪಲ್ಸ್ ಪೋಲಿಯೋ ಕಾರ್ಯಕ್ರಮ ನಡೆಯಲಿದ್ದು, ೫ ವರ್ಷದೊಳಗಿನ ಮಕ್ಕಳಿಗೆ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಧಾರವಾಡ ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಭಾನುವಾರ  ಹಮ್ಮಿಕೊಳ್ಳಲಾಗಿದ್ದು, ೫ ವರ್ಷದೊಳಗಿನ ೨ ಲಕ್ಷ ೮ ಸಾವಿರದ ೭೭೯ ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು, ೮೮೯ ಲಸಿಕಾ ಕೇಂದ್ರಗಳಿವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪರಶುರಾಮ ಎಫ್.ಕೆ. ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ: ಡಾ.ಪರಶುರಾಮ ಎಫ್.ಕೆ. (೩೨ ಸೆಕೆಂಡ್‌ಗಳು)

ವಿಜಯನಗರ ಜಿಲ್ಲೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದ ಅಂಗವಾಗಿ ಜಿಲ್ಲಾಡಳಿತ, ರೋಟರಿ ಕ್ಲಬ್, ಭಾರತೀಯ ವೈದ್ಯಕೀಯ ಸಂಘ ಮತ್ತಿತರ ಸಂಸ್ಥೆಗಳು ಸಿದ್ಧತೆ ಕೈಗೊಂಡಿವೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ’ಮನ್ ಕಿ ಬಾತ್’ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೫ನೇ ಆವೃತ್ತಿಯಾಗಿದೆ.  ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><*<><>*><>

ವಿಧಾನಪರಿಷತ್ ಚುನಾವಣೆಯಲ್ಲಿ ನಡೆದಿರುವ ಅಡ್ಡ ಮತದಾನ ವಿದ್ಯಮಾನವನ್ನು ಬಿಜೆಪಿ ಪಕ್ಷ ವರಿಷ್ಠರು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದಾರೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಕೇಂದ್ರದ ನಾಯಕರು ಈ ಇಡೀ ಬೆಳವಣಿಗೆಯನ್ನು ತೀಕ್ಷ್ಣವಾಗಿ ಗಮನಿಸುತ್ತಿದ್ದಾರೆ. ಹೈಕಮಾಂಡ್ ಮಟ್ಟದಲ್ಲೇ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಲಾಗಿದ್ದು, ಇದರಿಂದ ಆಗಿರುವ ಸಾಧಕ-ಬಾಧಕಗಳ ಕುರಿತು ಈಗಾಗಲೇ ಪಕ್ಷದ ವಲಯದಲ್ಲಿ ಸುದೀರ್ಘ ವಿಶ್ಲೇಷಣೆ ನಡೆದಿದೆ. ತಪ್ಪಿತಸ್ಥರ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಬೇಕು ಎಂಬುದರ ಬಗ್ಗೆ ಈಗಾಗಲೇ ಚಿಂತನೆ ನಡೆದಿದೆ. ಮುಂದಿನ ದಿನಗಳಲ್ಲಿ ಪಕ್ಷದ ವರಿಷ್ಠರು ಕೈಗೊಳ್ಳಲಿರುವ ಶಿಸ್ತು ಕ್ರಮದ ನಿರ್ಧಾರವನ್ನು ಕಾದು ನೋಡಬೇಕಿದೆ ಎಂದು ಹೇಳಿದರು.

<><*<><>*><>

ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಇಂದು ಬೆಂಗಳೂರಿನ ಎಂ.ಎಸ್. ಬಿಲ್ಡಿಂಗ್‌ನಲ್ಲಿರುವ ಪೊಲೀಸ್ ಕಂಪ್ಯೂಟರ್ ವಿಭಾಗಕ್ಕೆ ಭೇಟಿ ನೀಡಿ, ಇಲಾಖೆಯ ಕಾರ್ಯಚಟುವಟಿಕೆಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ.ಸಲೀಂ ಹಾಗೂ ಪೊಲೀಸ್ ಕಂಪ್ಯೂಟರ್ ವಿಭಾಗದ ಹಿರಿಯ ಅಧಿಕಾರಿಗಳು ಸಚಿವರಿಗೆ ವಿಭಾಗದ ವಿವಿಧ ಕಾರ್ಯತಂತ್ರಗಳು, ತಾಂತ್ರಿಕ ಮೂಲಸೌಕರ್ಯ ಮತ್ತು ಪ್ರಗತಿಯ ಕುರಿತು ವಿವರವಾದ ಮಾಹಿತಿ ನೀಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>